Akashvani : Bangalore
Regional Bulletin In Kannada
20.01.2025 / 14.30 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

- ಇ.ಡಿ ಯಿಂದ ಮುಡಾ ಸೈಟ್ ಮುಟ್ಟುಗೋಲಿಗೂ ತಮಗೂ ಸಂಬಂಧವಿಲ್ಲ: ಮುಖ್ಯಮಂತ್ರಿ ಸಿದ್ದರಾಮಯ್ಯ
- ಪ್ಲಾಸ್ಟಿಕ್ ತ್ಯಾಜ್ಯ ಅರಣ್ಯ ಪ್ರವೇಶಿಸಿದಂತೆ ತಡೆಯಲು, ಎರಡು ಹಂತದ ತಪಾಸಣಾ ವ್ಯವಸ್ಥೆ ಜಾರಿಗೆ ಅರಣ್ಯ ಇಲಾಖೆ ನಿರ್ಧಾರ
- ಚಿಕ್ಕಮಗಳೂರಿನಲ್ಲಿ ಮುಖ್ಯಮಂತ್ರಿಗಳ ಮುಂದೆ ಶರಣಾಗತಿಯಾದ ಆರು ಮಂದಿ ನಕ್ಸಲರ ವಿಚಾರಣೆ
- ರಾಜ್ಯದ ಹಲವೆಡೆ ಗೋವುಗಳ ಮೇಲೆ ದಾಳಿ ಪ್ರಕರಣ; ಸರ್ಕಾರ ಮಧ್ಯ ಪ್ರವೇಶಿಸುವಂತೆ ಬಿಜೆಪಿ ಆಗ್ರಹ
- ಮಂಡ್ಯದ ಮದ್ದೂರಿನಲ್ಲಿ ಕೆ.ಎಸ್.ಆರ್.ಟಿ.ಸಿ. ಬಸ್ ಪಲ್ಟಿ; ೩೩ ಪ್ರಯಾಣಿಕರಿಗೆ ಗಾಯ

<><*<><>*><>

ಮುಡಾ ಹಗರಣ ಸಂಬಂಧ ತನಿಖೆ ನಡೆಸುತ್ತಿರುವ ಜಾರಿ ನಿರ್ದೇಶನಾಲಯ, ನಿವೇಶನಗಳನ್ನು ಮುಟ್ಟುಗೋಲು ಹಾಕಿಕೊಂಡಿರುವ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಕ್ರಿಯಿಸಿದ್ದಾರೆ.ªÀÄ ಬೆಂಗಳೂರಿನಲ್ಲಿ ಮಾತನಾಡಿದ ಅವರು, ಇ.ಡಿ ಅಧಿಕಾರಿಗಳ ಮಾಧ್ಯಮ ಪ್ರಕಟಣೆಗೂ ತಮಗೂ ಸಂಬಂಧವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಪತ್ರಿಕಾ ಪ್ರಕಟಣೆ ಹಿಂದೆ ರಾಜಕೀಯ ದುರುದ್ದೇಶವಿದೆ ಎಂದು ಆರೋಪಿಸಿದ್ದಾರೆ. ಬಿಜೆಪಿ, ಇ.ಡಿ ಮೂಲಕ ಮಾಧ್ಯಮ ಪ್ರಕಟಣೆ ಬಿಡುಗಡೆ ಮಾಡಿಸಿದೆ ಎಂದು ಅವರು ಆರೋಪಿಸಿದ್ದಾರೆ.

ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ

ನಾಳೆ ಬೆಳಗಾವಿ ಸುವರ್ಣಸೌಧದಲ್ಲಿ ಗಾಂಧಿಪ್ರತಿಮೆ ಅನಾವರಣ ಮಾಡಲಾಗುವುದು. ನಂತರ ಜೈ ಬಾಪು, ಜೈ ಭೀಮ್, ಜೈ ಸಂವಿಧಾನ ಸಮಾವೇಶ ನಡೆಯಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

<><*<><>*><>

ಪಕ್ಷದಲ್ಲಿ ಯಾರೊಂದಿಗೂ ಭಿನ್ನಾಭಿಪ್ರಾಯವಿಲ್ಲ, ಪಕ್ಷಕ್ಕಾಗಿ ಕೆಲಸ ಮಾಡುವರಿಗೆ ತಲೆ ಬಾಗುವುದಾಗಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ರಾಜ್ಯ ಕಾಂಗ್ರೆಸ್ ಉಸ್ತುವಾರಿ

ರಣದೀಪ್ ಸಿಂಗ್ ಸುರ್ಜೇವಾಲ ವಿರುದ್ಧವೇ ಕೆಲವು ಮಂದಿ ಸಚಿವರು ಅಸಮಾಧಾನಗೊಂಡಿದ್ದಾರೆ ಎಂಬ ವರದಿಗಳ ಬಗ್ಗೆ ಬೆಳಗಾವಿಯಲ್ಲಿ ಪ್ರತಿಕ್ರಿಯಿಸಿದ ಅವರು ಮಾಧ್ಯಮಗಳು ಸುಳ್ಳು ಹೇಳಿ ಅವರ ವರ್ಚಸ್ಸಿಗೆ ಧಕ್ಕೆ ತರುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಪಕ್ಷ ಹಾಗೂ ಕಾರ್ಯಕರ್ತರನ್ನು ರಕ್ಷಿಸುವುದು ಹಾಗೂ ಸರ್ಕಾರವನ್ನು ಸುಭದ್ರವಾಗಿಡುವುದು ತಮ್ಮ ಕೆಲಸ ಎಂದು ಡಿ.ಕೆ.ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ.

ಧ್ವನಿ: ಡಿ.ಕೆ.ಶಿವಕುಮಾರ್ ಉಪಮುಖ್ಯಮಂತ್ರಿ

<><*<><>*><>

ವನ್ಯಜೀವಿಗಳ ಪ್ರಾಣಕ್ಕೆ ಕುತ್ತು ತರುವ ಪ್ಲಾಸ್ಟಿಕ್ ತ್ಯಾಜ್ಯ ಅರಣ್ಯ ಪ್ರವೇಶಿಸದಂತೆ ತಡೆಯಲು ೨ ಹಂತದ ತಪಾಸಣೆ ವ್ಯವಸ್ಥೆ ಜಾರಿಗೆ ತರುವಂತೆ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಮೈಸೂರಿನಲ್ಲಿ ನಿನ್ನೆ ಅರಣ್ಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ನಾಗರಹೊಳೆ, ಮೇಟಿಕುಪ್ಪೆ, ಕಲಹಳ್ಳ ಮತ್ತು ವೀರನಹೊಸಹಳ್ಳಿ ವಲಯಗಳ ಚೆಕ್ ಪೋಸ್ಟ್ ಗಳಲ್ಲಿ ಬೃಹತ್ ಗಾತ್ರದ ತ್ಯಾಜ್ಯ ಬುಟ್ಟಿಗಳನ್ನು ಇಡಲಾಗಿದೆ. ಇದರ ಬದಲು ಪ್ರವೇಶದ್ವಾರದಲ್ಲಿ ೨ ಹಂತದ ತಪಾಸಣೆ ನಡೆಸುವಂತೆ ತಿಳಿಸಿದ್ದಾರೆ. ವಾಹನಗಳಲ್ಲಿ ಏಕ ಬಳಕೆ ಪ್ಲಾಸ್ಟಿಕ್ ಇದ್ದರೆ ದಂಡ ವಿಧಿಸುವಂತೆ ಸೂಚಿಸಿದ್ದಾರೆ. ಮಾನವ-ವನ್ಯ ಜೀವಿ ಸಂಘರ್ಷ ಹೆಚ್ಚಾಗುತಿರುವ ಬಗ್ಗೆ ಆತಂಕ ವ್ಯಕ್ತಪಡಿಸಿದ ಸಚಿವರು, ಅರಣ್ಯದೊಳಗೆ ನೀರು ಮತ್ತು ಆಹಾರದ ಕೊರತೆ ಆಗದಂತೆ ಯೋಜನೆ ರೂಪಿಸಿ ಎಂದು ನಿರ್ದೇಶನ ನೀಡಿದ್ದಾರೆ. ಇದೇ ವೇಳೆ ರಂಗನತಿಟ್ಟು ಪಕ್ಷಿಧಾಮದಲ್ಲಿ ಆನ್ ಲೈನ್ ಮೂಲಕ ಟಿಕೆಟ್ ಕಾಯ್ದಿರಿಸುವ ವ್ಯವಸ್ಥೆ ಜಾರಿ ಮಾಡುವಂತೆ ಹೇಳಿದ್ದಾರೆ.

<><*<><>*><>

ಮುಖ್ಯಮಂತ್ರಿಗಳ ಮುಂದೆ ಶರಣಾಗತಿಯಾದ ೬ ಮಂದಿ ನಕ್ಸಲರನ್ನು ಚಿಕ್ಕಮಗಳೂರಿಗೆ ಕರೆತಂದು ವಿಚಾರಣೆ ನಡೆಸಲಾಗುತ್ತಿದೆ. ಶರಣಾಗತಿಯಾದ ಮುಂಡಗಾರ್ ಲತಾ, ಜೀಷ, ಸುಂದರಿ, ವನಜಾಕ್ಷಿ, ಜಯಣ್ಣ, ವಸಂತ್ ಮೇಲಿರುವ ಪ್ರಕರಣಗಳು, ಇವರು ಸಂಗ್ರಹಿಸಿದ ಶಸ್ತ್ರಾಸ್ತ್ರಗಳು ಈ ಎಲ್ಲಾ ವಿಚಾರಗಳ ಬಗ್ಗೆ ಚಿಕ್ಕಮಗಳೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಕ್ರಂ ಅಮಾಟೆ, ಕೊಪ್ಪ ಡಿ.ವೈ.ಎಸ್.ಪಿ ಬಾಲಾಜಿ ನೇತೃತ್ವದಲ್ಲಿ ವಿಚಾರಣೆ ನಡೆಸಲಾಗುತ್ತಿದೆ. ನಕ್ಸಲರ್ ಸಂಚರಿಸಿದ ಪಶ್ಚಿಮಘಟ್ಟ ಸಾಲಿನ ಅರಣ್ಯ, ಶಸ್ತ್ರಾಸ್ತ್ರ ಸಂಗ್ರಹಿಸಿ ಇರಿಸಿದ್ದ ಅರಣ್ಯ ಪ್ರದೇಶಗಳಿಗೆ ಕರೆದೊಯ್ದು ಸ್ಥಳ ಮಹಜರು ಮಾಡಲಾಗಿದೆ. ವಿಚಾರಣೆಗೂ ಮುನ್ನ ೬ ಜನರ ಆರೋಗ್ಯ ತಪಾಸಣೆಯನ್ನು ಮಾಡಲಾಗಿದೆ ಎಂದು ಪೊಲೀಸ್ ಇಲಾಖೆ ಮಾಹಿತಿ ನೀಡಿದೆ.

<><*<><>*><>

ಚಾಮರಾಜಪೇಟೆಯಲ್ಲಿ ಹಸುವಿನ ಕೆಚ್ಚಲು ಕತ್ತರಿಸಿದ ಘಟನೆಯ ಮಾಸುವ ಮುನ್ನ ಉತ್ತರಕನ್ನಡದ ಹೊನ್ನಾವರದಲ್ಲಿ ಇನ್ನೊಂದು ಪ್ರಕರಣ ಬೆಳಕಿಗೆ ಬಂದಿದೆ. ಇದನ್ನು ಸರ್ಕಾರ ಅತ್ಯಂತ ಗಂಭೀವಾಗಿ ಪರಿಗಣಿಸುವಂತೆ ವಿಧಾನಸಭೆ ಪ್ರತಿಪಕ್ಷ ನಾಯಕ ಆರ್.ಅಶೋಕ ಸರ್ಕಾರಕ್ಕೆ ಮನವಿ ಮಾಡಿದ್ದಾರೆ. ಸರ್ಕಾರ ಇಂತಹ ಕೃತ್ಯಗಳಿಗೆ ಕಡಿವಾಣ ಹಾಕದಿದ್ದರೆ, ಉಗ್ರ ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

<><*<><>*><>

ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕಿನ ರುದ್ರಾಕ್ಷಿಪುರ ಗೇಟ್ ಬಳಿ ಕೆ.ಎಸ್.ಆರ್.ಟಿ.ಸಿ ಬಸ್ಸೊಂದು ಚಾಲಕನ ನಿಯಂತ್ರಣ ತಪ್ಪಿ ಉರುಳಿಬಿದ್ದ ಪರಿಣಾಮ ಬಸ್ ನಲ್ಲಿದ್ದ ೩೩ ಮಂದಿ ಗಾಯಗೊಂಡಿದ್ದಾರೆ. ಚಾಮರಾಜನಗರದಿಂದ ಬೆಂಗಳೂರಿಗೆ ತೆರಳುತ್ತಿದ್ದ ಬಸ್ಸಿನಲ್ಲಿ ಮಹಿಳೆಯರು ಹಾಗೂ ವಿದ್ಯಾರ್ಥಿಗಳೇ ಹೆಚ್ಚಿದ್ದರು ಎನ್ನಲಾಗಿದೆ. ಗಾಯಾಳುಗಳನ್ನು ಮದ್ದೂರು ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಆಸ್ಪತ್ರೆಗೆ ಜಿಲ್ಲಾಧಿಕಾರಿ ಡಾ.ಕುಮಾರ, ಜಿಲ್ಲಾ ಪಂಚಾಯತ್ ಸಿಇಒ ಶೇಕ್ ತನ್ವೀರ್ ಆಸೀಫ್ ಭೇಟಿ ನೀಡಿ ಆರೋಗ್ಯ ವಿಚಾರಿಸಿದ್ದಾರೆ. ಬಳಿಕ ಮಾತನಾಡಿದ ಜಿಲ್ಲಾಧಿಕಾರಿ, ೩೩ ಮಂದಿಯ ಪೈಕಿ ಮೂರು ಮಂದಿ ಗಂಭೀರವಾಗಿ ಗಾಯಗೊಂಡಿದ್ದು, ಇವರನ್ನು ಬೆಂಗಳೂರಿನ ನಿಮ್ಹಾನ್ಸ್ ಗೆ ಕರೆದೊಯ್ಯಲಾಗುವುದು ಎಂದು ತಿಳಿಸಿದ್ದಾರೆ.

<><*<><>*><>

ಚೊಚ್ಚಲ ಖೋ ಖೋ ವಿಶ್ವಕಪ್ ನಲ್ಲಿ ಗೆದ್ದು ಪ್ರಶಸ್ತಿ ಮುಡಿಗೇರಿಸಿಕೊಂಡ ಭಾರತದ ಮಹಿಳಾ ತಂಡದಲ್ಲಿ ಭಾಗಿಯಾಗಿದ್ದ ಮೈಸೂರು ಜಿಲ್ಲೆಯ ನರಸೀಪುರ ತಾಲೂಕಿನ ಕುರುಬೂರು ಗ್ರಾಮದ ಪ್ರತಿಭೆ ಚೈತ್ರ ಮನೆಯಲ್ಲಿ ಸಂಭ್ರಮ ಮನೆ ಮಾಡಿದೆ. ಪೋಷಕರು ಮಗಳ ಟ್ರೋಫಿಗಳನ್ನು ಒಂದೆಡೆ ಇಟ್ಟು, ಸಂಭ್ರಮಿಸಿದ್ದಾರೆ. ಮಗಳ ಸಾಧನೆ ಬಗ್ಗೆ ಚೈತ್ರ ತಂದೆ ಬಸವಣ್ಣ, ತಾಯಿ ನಾಗರತ್ನ ಆಕಾಶವಾಣಿಯೊಂದಿಗೆ ಸಂತಸ ಹಂಚಿಕೊಂಡಿದ್ದಾರೆ.

ಧ್ವನಿ: ಬಸವಣ್ಣ ಚೈತ್ರ ತಂದೆ

<><*<><>*><>

ಇಂದಿನ ಸಮಾಜದಲ್ಲಿ ಅಸಹಿಷ್ಣುತೆ ಹೆಚ್ಚುತ್ತಿರುವುದು ಕಳವಳಕಾರಿಯಾಗಿದೆ ಎಂದು ಖ್ಯಾತ ಸಮಾಜವಾದಿ ಚಿಂತಕ ಕೋಣಂದೂರು ಲಿಂಗಪ್ಪ ಅಭಿಪ್ರಾಯಪಟ್ಟಿದ್ದಾರೆ. ತೀರ್ಥಹಳ್ಳಿ ತಾಲೂಕಿನ ಕೋಣಂದೂರಿನ ತಮ್ಮ ಸ್ವಗೃಹದಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಗೋಕಾಕ್ ಚಳವಳಿಯ ನೆನಪಿನಲ್ಲಿ ನೀಡಲಾಗುವ ಕನ್ನಡ ಚಳವಳಿಯ ಪ್ರವರ್ತಕ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಜನರು, ಸಮಾಜವಾದದ ತತ್ವಸಿದ್ಧಾಂತಗಳ ಕುರಿತು ಸಿನಿಕರಾಗಿರುವುದು ಪ್ರಮುಖ ಕಾರಣವಾಗಿದೆ ಎಂದು ಹೇಳಿದ್ದಾರೆ. ಜನಪರವಾದ ಹೋರಾಟಗಳಿಲ್ಲದೇ ಇಂದು ಸಮಾಜವು ಸೊರಗುತ್ತಿದೆ. ತಮ್ಮ ಕಾಲದ ಚಳವಳಿಗಳಲ್ಲಿನ ಸಾಮಾಜಿಕ ಕಳಕಳಿ, ತತ್ವನಿಷ್ಠೆಗಳು

ಇಂದು ಕಾಣುತ್ತಿಲ್ಲ, ಹೋರಾಟಗಳಿಗೆ ಪ್ರೇರಣೆಯೂ ಸಿಗುತ್ತಿಲ್ಲ. ಕನ್ನಡ ಭಾಷೆ ಸೊರಗುತ್ತಿರುವುದಕ್ಕೆ ಜನರ ನಿರಾಸಕ್ತಿಯ ಜೊತೆಗೆ ಸರ್ಕಾರಗಳ ಧೋರಣೆಯೂ ಕಾರಣವಾಗಿದೆ ಎಂದು ಹೇಳಿದ್ದಾರೆ.

<><*<><>*><>

ಕಳೆದ ೧೯ ದಿನಗಳಲ್ಲಿ ದಾವಣಗೆರೆಯಲ್ಲಿ ಸಂಚಾರ ನಿಯಮ ಉಲ್ಲಂಘಿಸಿದ ವಾಹನ ಸವಾರರಿಂದ ೪ ಲಕ್ಷದ ೫೦ ಸಾವಿರ ರೂಪಾಯಿ ದಂಡ ಸಂಗ್ರಹಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ತಿಳಿಸಿದ್ದಾರೆ. ಜನವರಿ ೧ ರಿಂದ ನಿನ್ನೆಯವರೆಗೂ ನಡೆದ ವಿಶೇಷ ಕಾರ್ಯಾಚರಣೆಯಲ್ಲಿ ೮೦೦ ಕ್ಕೂ ಅಧಿಕ ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳನ್ನು ದಾಖಲಿಸಿ ೪ ಲಕ್ಷದ ೫೦ ಸಾವಿರ ರೂಪಾಯಿ ದಂಡ ಸಂಗ್ರಹಿಸಲಾಗಿದೆ ಎಂದು ಅವರು ಹೇಳಿದ್ದಾರೆ. ಈ ವಿಶೇಷ ಕಾರ್ಯಾಚರಣೆ ಮುಂದುವರಿಯಲಿದ್ದು, ಆನ್‌ಲೈನ್ ದಂಡ ಪಾವತಿ ಬಾಕಿ ಉಳಿಸಿಕೊಂಡಿರುವವರು ಸಂಚಾರಿ ಪೊಲೀಸ್ ಠಾಣೆ ಅಥವಾ ಮುಖ್ಯ ಅಂಚೆ ಕಚೇರಿಯಲ್ಲಿ ದಂಡ ಪಾವತಿಸಬಹುದು ಎಂದು ತಿಳಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>